E-920185

**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 218 ಎಲ್‌ಬಿಪಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ. 05.11.2022

**ಸುತ್ತೋಲೆ**

**ವಿಷಯ:-** ರಾಷ್ಟ್ರೀಯ ಶೈಕ್ಷಣಿಕ ಸಮ್ಮೇಳನದಲ್ಲಿ ಭಾಗವಹಿಸಲು OOD (ಅನ್ಯ ಕಾರ್ಯ ನಿಮಿತ್ತ) ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:-** ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಇವರ ಟಿಪ್ಪಣಿ ದಿನಾಂಕ:03.11.2022

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕ ಸಂಘವು ಅಖಿಲ ಭಾರತೀಯ ರಾಷ್ಟ್ರೀಯ ಶೈಕ್ಷಣೀಕ ಮಹಾಸಂಘದೊಂದಿಗೆ ಸಂಲಗ್ನಗೊಂಡು ರಾಷ್ಟ್ರಮಟ್ಟದಲ್ಲಿ ಶೈಕ್ಷಣಿಕವಾಗಿ ಉತ್ತಮ ಸೇವೆ ಸಲ್ಲಿಸಿರುವ ಸಂಘಟನೆಯಾಗಿದ್ದು, ಸದರಿ ಸಂಸ್ಥೆಯು ಈ ಬಾರಿ ರಾಷ್ಟ್ರೀಯ ಶೈಕ್ಷಣಿಕ ಸಮ್ಮೇಳನವನ್ನು ದಿನಾಂಕ:11, 12 ಮತ್ತು 13 ನವೆಂಬರ್ 2022 ರಂದು, ಜನಸೇವಾ ವಿದ್ಯಾ ಕೇಂದ್ರ, ಚನ್ನೇನಹಳ್ಳಿ, ಮಾಗಡಿ ರಸ್ತೆ, ಬೆಂಗಳೂರು ಇಲ್ಲಿ ಆಯೋಜಿಸಿದ್ದು, ಈ ಶೈಕ್ಷಣಿಕ ಸಮ್ಮೇಳನದಲ್ಲಿ ವಿಶೇಷವಾಗಿ **"ರಾಷ್ಟ್ರೀಯ ಶಿಕ್ಷಣ ನೀತಿ-2020"** ಪ್ರಧಾನ ವಿಷಯವಾಗಿದ್ದು, ಸದರಿ ಸಮ್ಮೇಳನದಲ್ಲಿ ಮಾನ್ಯ ಕೇಂದ್ರ **ಶಿಕ್ಷಣ ಸಚಿವರಾದ ಶ್ರೀ ಧರ್ಮೇಂದ್ರ ಪ್ರಧಾನ್ ರವರು ಹಾಗೂ ರಾಜ್ಯದ ಮಾನ್ಯ ಮುಖ್ಯಮಂತ್ರಿಗಳು** ಭಾಗವಹಿಸಲಿದ್ದು, ಶಿಕ್ಷಕರಿಗೆ ಇದೊಂದು ಉಪಯುಕ್ತ ಕಾರ್ಯಕ್ರಮವಾಗಿರುವುದರಿಂದ, ಸದರಿ ಶೈಕ್ಷಣಿಕ ಸಮ್ಮೇಳನದಲ್ಲಿ ಭಾಗವಹಿಸುವ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕರು, ಪದವಿ ಪೂರ್ವ ಶಿಕ್ಷಣದ ಪ್ರಾಂಶುಪಾಲರು ಹಾಗೂ ಉಪನ್ಯಾಸಕರುಗಳಿಗೆ ಸದರಿ ದಿನಗಳದಂದು ಅನ್ಯ ಕರ್ತವ್ಯ ನಿಮಿತ್ತ ಎಂದು (ಹಾಜರಾತಿ ಪ್ರಮಾಣಪತ್ರ ನೀಡುವ ಷರತ್ತಿಗೊಳಪಟ್ಟು) ಪರಿಗಣಿಸಲು ಸರ್ಕಾರದ ಮಂಜೂರಾತಿ ನೀಡಿದೆ.

V. S. 05/11/2022

**(ವಿ. ಶ್ರೀನಿವಾಸಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ನೃಪತುಂಗ ರಸ್ತೆ, ಬೆಂಗಳೂರು - 01

E-4975259

**ಇವರಿಗೆ:**

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಮಲ್ಲೇಶ್ವರಂ, ಬೆಂಗಳೂರು
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
4. ಎಲ್ಲಾ ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
5. ಎಲ್ಲಾ ಜಂಟಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
6. ಎಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
7. ಎಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿ:**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
3. ಸರ್ಕಾರದ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತುಸಾಕ್ಷರತಾ ಇಲಾಖೆ.
4. ಸರ್ಕಾರದ ಉಪ ಕಾರ್ಯದರ್ಶಿಗಳು (ಸೇವೆಗಳು-1 ಮತ್ತು 2) ರವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತುಸಾಕ್ಷರತಾ ಇಲಾಖೆ.